1. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು, ಮಾನ್ಯ ಮುಖ್ಯ ಮಂತ್ರಿಯವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2013ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ರಾಜ್ಯ ಹಣಕಾಸು ವ್ಯವಹಾರಗಳ ಮತ್ತು ಸಾಮಾನ್ಯ ಹಾಗೂ ಸಾಮಾಜಿಕ ವಲಯದ ಮೇಲಿನ ವರದಿಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

2. ವಿತ್ತೀಯ ಕಾರ್ಯಕಲಾಪಗಳು

2014–2015ನೇ ಸಾಲಿನ ಆಯವ್ಯಯದ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ

ಶ್ರೀ ಕೆ.ಬಿ. ಪ್ರಸನ್ನಕುಮಾರ್(ಶಿವಮೊಗ್ಗ):– ಮಾನ್ಯ ಅಧ್ಯಕ್ಷರೆ, 2014–2015 ನೇ ಸಾಲಿನ ಆಯವ್ಯಯದ ಮೇಲೆ ನನಗೆ ಮಾತನಾಡಲು ಅವಕಾಶ ಕೊಟ್ಟ ತಮಗೆ ಧನ್ಯವಾದಗಳು. ಶ್ರೀಸಾಮಾನ್ಯನಿಗೆ ಹೊರೆಯಾಗದ ಮತ್ತು ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗುವಂತೆ ವೈಜ್ಞಾನಿಕವಾಗಿ ಚಿಂತನೆಯನ್ನು ನಡೆಸಿ ಸಾಮಾಜಿಕ ನ್ಯಾಯಕ್ಕೆ ಆದ್ಯತೆಯನ್ನು ನೀಡಿದಂಥ ಪ್ರಗತಿ ಪರ ಆಯವ್ಯಯವನ್ನು ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ನವರು ನೀಡಿದ್ದಾರೆ. ಅದಕ್ಕಾಗಿ ಅವರಿಗೆ ಮಲೆನಾಡಿನ ಎಲ್ಲಾ ಜನತೆಯ ಪರವಾಗಿ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಈ ನಾಡಿನ ಅಭಿವೃದ್ಧಿಗಾಗಿ ಹಾಗೂ ಬಡತನ ನಿವಾರಣೆಗಾಗಿ ಸಾಕಷ್ಟು ಅಂಶಗಳನ್ನು ಈ ಆಯವ್ಯಯದಲ್ಲಿ ಅಳವಡಿಸಿಕೊಳ್ಳಲಾಗಿದೆ. ವಿಶೇಷವಾಗಿ 'ಅನ್ನದಾತನೊಂದಿಗೆ ನಮ್ಮ ಸರ್ಕಾರ' ಮುಖ್ಯವಾಗಿ ಕೃಷಿ ಬೆಲೆ ಆಯೋಗವನ್ನು ರಚನೆ ಮಾಡಲು ಪ್ರಯತ್ನ ಮಾಡಿರುವಂಥದ್ದು, ಕೃಷಿ ವಿಶ್ವವಿದ್ಯಾಲಯ ಹಾಗೂ ಕೃಷಿ ಪದವಿ ಕಾಲೇಜುಗಳಲ್ಲಿ ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ. 40 ಮೀಸಲಾತಿಯನ್ನು